ಮೂಲ ದಾವಾ ಸಂಖ್ಯೆ. 37/2023 ಪಿ ಡಬ್ಲ್ಯೂ 4

(ದಿನಾಂಕ 24-09-2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣಿಕರಿಸಲಾಯಿತು.)

ಪಾಟೀ ಸವಾಲುಃ ಪ್ರತಿವಾದಿ ಪರ ಶ್ರೀ ಕೆ ಪಿ ಕೆ ವಕೀಲರಿಂದಃ-

ದಾವಾ ಜಮೀನು ಸರ್ವೆ ನಂಬರ್ ಎಷ್ಟು, ಅದು ಒಟ್ಟು ಎಷ್ಟು ವಿಸ್ತೀರ್ಣ ಇದೆ ಎಂದರೆ ನನಗೆ ಗೊತ್ತಿಲ್ಲ. ಸಾಕ್ಷಿ ಮುಂದುವರೆದು ಅದು 3.80 ಎಕರೆ ಜಮೀನು ಇದೆ ಎನ್ನುತ್ತಾರೆ. ದಾವಾ ಜಮೀನು ಪಹಣಿಗಳಲ್ಲಿ ಯಾರ್ಯಾರ ಹೆಸರಿನಲ್ಲಿ ಎಷ್ಟು ಎಷ್ಟು ಕ್ಷೇತ್ರ ನಮೂದು ಇದೆ ಎನ್ನುವ ಬಗ್ಗೆ ನನಗೆ ಮಾಹಿತಿ ಇಲ್ಲ.

ದಾವಾ ಜಮೀನಿಗೆ ಸಂಬಂಧಿಸಿದ ಯಾವುದೇ ದಾಖಲೆಗಳನ್ನು ನಾನು ನೋಡಿಲ್ಲ. ನನಗೆ ಓದಲು ಬರುವುದಿಲ್ಲ. ಪ್ರತಿವಾದಿಯ ತಂದೆ ಹೊನ್ನಮ್ಮ ಇವರಿಂದ 2 ಎಕರೆ 80 ಸೆಂಟ್ಸ ಜಮೀನನ್ನು ದಿಃ11-01-2005 ರಂದು ಖರೀದಿ ಮಾಡಿರುತ್ತಾರೆಂದರೆ ನನಗೆ ಗೊತ್ತಿಲ್ಲ. ಅಲ್ಲಿಂದ ಸದರಿ 2.80 ಎಕರೆ ಜಮೀನಿನಲ್ಲಿ ಪ್ರತಿವಾದಿಯ ತಂದೆ ಮತ್ತು ಪ್ರತಿವಾದಿ ಸ್ವಾಧೀನದಲ್ಲಿರುತ್ತಾರೆಂದರೆ ನನಗೆ ಗೊತ್ತಿಲ್ಲ. ಅವರ ತಂದೆ ಮರಣದ ನಂತರ ಪ್ರತಿವಾದಿ ಮತ್ತು ಅವರ ಸಹೋದರನ ನಡುವೆಯಾದ ಪಾಲುವಿಭಾಗದಲ್ಲಿ 2.80 ಎಕರೆ ಜಮೀನು ಪ್ರತಿವಾದಿಯ ಪಾಲಿಗೆ ಬಂದಿರುತ್ತದೆಂದರೆ ನನಗೆ ಗೊತ್ತಿಲ್ಲ. ಅಲ್ಲಿಂದ ಇಲ್ಲಿಯವರೆಗೆ ಪ್ರತಿವಾದಿಯೇ ಸದರಿ 2.80 ಎಕರೆ ಜಮೀನಿನ ಸ್ವಾಧೀನದಲ್ಲಿರುತ್ತಾನೆಂದರೆ ಸರಿಯಲ್ಲ. ದಾವಾಸ್ತಿಗಳು ನಮ್ಮ ಪಿತ್ರಾರ್ಜಿತ ಆಸ್ತಿಗಳು ಅಂತಾ ನನ್ನ ಸಾಕ್ಷ್ಯ ಪ್ರಮಾಣಪತ್ರದಲ್ಲಿ ಹೇಳಿ ಬರೆಸಿಲ್ಲ. ದಾವಾ ಜಮೀನಿನ ಪಕ್ಕದಲ್ಲಿ ನನ್ನ ಜಮೀನು ಇದೆ ಅದರ ಸರ್ವೆ ನಂಬರ್ ನನಗೆ ಹೇಳಲು ಬರುವುದಿಲ್ಲ.

ದಾವಾ ಜಮೀನಿನ ಪಕ್ಕ ನನ್ನ ಯಾವುದೇ ಜಮೀನು ಇರುವುದಿಲ್ಲವೆಂದರೆ ಸಾಕ್ಷಿಯು ನಾನು 1ನೇ ವಾದಿಯ ಜಮೀನಿಗೆ ಕೆಲಸಕ್ಕೆ ಹೋಗುತ್ತೇನೆ ಎನ್ನುತ್ತಾರೆ. ಆ ಕಾರಣದಿಂದಾಗಿ ಅವರಿಗೆ ಸಹಾಯ ಮಾಡಲು ದಾವೆಯ ವಿಚಾರ ನನಗೆ ಗೊತ್ತಿಲ್ಲದಿದ್ದರೂ ಸಹಾ ಸುಳ್ಳು ಸಾಕ್ಷಿ ಪ್ರಮಾಣಪತ್ರವನ್ನು ದಾಖಲಿಸಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

ಮರು ವಿಚಾರಣೆಃ ಇಲ್ಲ

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕೀಕೃತ ಮಾಡಲಾಯಿತು.)

ಓ. ಹೇ. ಕೇ. ಸರಿ ಇದೆ,

ಸಿವಿಲ್ ಜಡ್ಜ ಮತ್ತು ಜೆ ಎಂ ಎಫ್ ಸಿ.,
ಹಗರಿಬೊಮ್ಮನಹಳ್ಳಿ